## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು | : ಶ್ರೀ ಛಲವಾದಿ ಟಿ ನಾರಾಯಣಸ್ವಾಮಿ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 282 |
| ಉತ್ತರಿಸಬೇಕಾದ ದಿನಾಂಕ | : 18-08-2026 |
| ಉತ್ತರಿಸಬೇಕಾದ ಸಚಿವರು | : ಮಾನ್ಯ ಸಹಕಾರ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಹಾಲು ಉತ್ಪಾದಕರ ಒಕ್ಕೂಟಗಳೆಷ್ಟು; ಹಾಲು ಉತ್ಪಾದಕರ ಸಹಕಾರ ಸಂಘಗಳು ಎಷ್ಟಿವೆ; ಎಷ್ಟು ಜನ ನೋಂದಾಯಿತ ಹಾಲು ಉತ್ಪಾದಕರಿದ್ದಾರೆ; ದಿನಪ್ರತಿ ಎಷ್ಟು ಜನ ರೈತರು ಹಾಲು ಸರಬರಾಜು ಮಾಡುತ್ತಿದ್ದಾರೆ; ಹಾಲಿನ ಪ್ರೋತ್ಸಾಹಧನವನ್ನು ಪಡೆಯುತ್ತಿರುವ ರೈತರ ಸಂಖ್ಯೆ ಎಷ್ಟು; ಸಾಮಾನ್ಯ, ಪರಿಶಿಷ್ಟ ಜಾತಿ ಮತ್ತು ಪಂಗಡಗಳ ರೈತರ ಸಂಖ್ಯೆ ಎಷ್ಟು; | ಕರ್ನಾಟಕ ಹಾಲು ಮಹಾಮಂಡಳದ ವ್ಯಾಪ್ತಿಯಲ್ಲಿ 16 ಜಿಲ್ಲಾ ಹಾಲು ಒಕ್ಕೂಟಗಳು ಕಾರ್ಯನಿರ್ವಹಿಸುತ್ತಿವೆ.<br><br>ಪ್ರಸ್ತುತ 16,381 ಪ್ರಾಥಮಿಕ ಹಾಲು ಉತ್ಪಾದಕರ ಸಹಕಾರ ಸಂಘಗಳಿದ್ದು, ಒಟ್ಟು 27.81 ಲಕ್ಷ ನೋಂದಾಯಿತ ಸದಸ್ಯರಿರುತ್ತಾರೆ. ದಿನವಹಿ ಸರಾಸರಿ 8.83 ಲಕ್ಷ ಸಕ್ರಿಯ ಸದಸ್ಯರು ಹಾಲು ಸರಬರಾಜು ಮಾಡುತಿದ್ದು, ಘನ ರಾಜ್ಯ ಸರ್ಕಾರದಿಂದ ರೂ.5/- ಗಳ ಪ್ರೋತ್ಸಾಹಧನವನ್ನು ಪಡೆಯುತ್ತಿರುತ್ತಾರೆ. ವಿವರ ಈ ಕೆಳಕಂಡಿರುತ್ತದೆ.<br><br>ಸಾಮಾನ್ಯ ವರ್ಗ 8.0 ಲಕ್ಷ,<br>ಪರಿಶಿಷ್ಟ ಜಾತಿ 0.50 ಲಕ್ಷ<br>ಪರಿಶಿಷ್ಟ ಪಂಗಡ 0.33 ಲಕ್ಷ |
| ಆ) | ಹೈನುಗಾರಿಕೆ ನಡೆಸುವ ರೈತರಿಗೆ ಅನುಕೂಲವಾಗುವ ಉದ್ದೇಶದಿಂದ ಯಾವ ಯೋಜನೆಗಳಡಿ ಪ್ರತಿ ಲೀಟರ್ ಹಾಲಿಗೆ ಎಷ್ಟು ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ; 2023-ಏಪ್ರಿಲ್ ತಿಂಗಳಿನಿಂದ 2026-ಜುಲೈ ತಿಂಗಳ ಅಂತ್ಯದವರೆಗೆ ಎಷ್ಟು ಮೊತ್ತವನ್ನು ರೈತರಿಗೆ ಪ್ರೋತ್ಸಾಹಧನದ ಯೋಜನೆಯಡಿ ಪಾವತಿ ಮಾಡಲಾಗಿದೆ: ಪ್ರೋತ್ಸಾಹಧನವನ್ನು ಪಾವತಿ ಮಾಡದೇ ಬಾಕಿ ಉಳಿಸಿಕೊಂಡಿರುವ ರೈತರ ಸಂಖ್ಯೆ ಮತ್ತು ಮೊತ್ತವೆಷ್ಟು; ಯಾವ ಕಾರಣಕ್ಕಾಗಿ | ಹೈನುಗಾರಿಕೆ ನಡೆಸುವ ರೈತರಿಗೆ ಅನುಕೂಲವಾಗುವ ಉದ್ದೇಶದಿಂದ ರಾಜ್ಯ ಸರ್ಕಾರವು ಕ್ಷೀರಧಾರೆ ಯೋಜನೆಯಡಿ ಹಾಲು ಉತ್ಪಾದಕರು ಸರಬರಾಜು ಮಾಡುವ ಪ್ರತಿ ಲೀ.ಗುಣಮಟ್ಟದ (ಕನಿಷ್ಟ ಶೇ.3.5 ಜಿಡ್ಡು ಮತ್ತು ಶೇ.8.5 ಜಿಡ್ಡೇತರ ಘನಾಂಶ) ಹಾಲಿಗೆ ರೂ.5/- ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ.<br><br>2023-ಏಪ್ರಿಲ್ ತಿಂಗಳಿನಿಂದ ಮೇ-2026 ರವರೆಗೆ ಒಟ್ಟು ರೂ.4990.48 ಕೋಟಿ ಪಾವತಿಯಾಗಿರುತ್ತದೆ. ಸಾಮಾನ್ಯ ವರ್ಗದ ಎಲ್ಲಾ 31 ಜಿಲ್ಲೆಗಳ ಫಲಾನುಭವಿಗಳಿಗೆ ಮಾರ್ಚ್ -2026 |

| | | |
|---|---|---|
| | ಬಾಕಿ ಉಳಿಸಿಕೊಳ್ಳಲಾಗಿದೆ; ಪ್ರೋತ್ಸಾಹಧನ ಬಾಕಿ ಇರುವುದರಿಂದ ಸರ್ಕಾರ ರೈತರಿಗೆ ಅನ್ಯಾಯ ಮಾಡಿದಂತಾಗುವುದಿಲ್ಲವೇ; | ರವರೆಗೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಎಲ್ಲಾ 31 ಜಿಲ್ಲೆಗಳ ಫಲಾನುಭವಿಗಳಿಗೆ ಮೇ-2026 ರವರೆಗೆ ಪ್ರೋತ್ಸಾಹಧನ ಪಾವತಿಯಾಗಿರುತ್ತದೆ.<br><br>ಎರಡನೇ ಕಂತಿನ ಅನುದಾನ ಸರ್ಕಾರದಿಂದ ಬಿಡುಗಡೆಯಾಗಿದ್ದು ಸಾಮಾನ್ಯ ವರ್ಗಕ್ಕೆ ಏಪ್ರಿಲ್ ಮತ್ತು ಮೇ-2026 ರ ಮಾಹೆಗೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಜೂನ್ -2026ರ ಮಾಹೆಯ ಪ್ರೋತ್ಸಾಹಧನ ಪಾವತಿಗೆ ಕ್ರಮವಿಡಲಾಗಿದೆ.<br><br>ಪ್ರಸ್ತುತ ಜಿಲ್ಲಾ ಹಾಲು ಒಕ್ಕೂಟಗಳಿಂದ ಜುಲೈ-2026 ರ ಮಾಹೆಯ ಹಾಲಿನ ಪ್ರೋತ್ಸಾಹ ಧನದ e-sign ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |
| ಇ) | ರೈತರಿಂದ ಸಂಗ್ರಹಿಸಿದ ಹಾಲು ಹಲವು ಸಹಕಾರಿ ಹಾಲು ಮಾರಾಟ ಮಂಡಳಿಗಳ ಮೂಲಕ ವಿತರಣೆ, ಮಾರಾಟ ಹಾಗೂ ಹಾಲಿನ ಇತರೆ ಉತ್ಪನ್ನಗಳ ಮಾರಾಟದಿಂದ ಹಣ ಸಂಗ್ರಹವು ಅಪಾರವಾಗಿ ಬರುತ್ತದೆ; ಆದರೂ ಕೂಡ ಹಾಲಿನ ಪ್ರೋತ್ಸಾಹಧನವನ್ನು ರೈತರಿಗೆ ನಿಗದಿತ ಸಮಯದಲ್ಲಿ ನೀಡಲು ಸರ್ಕಾರಕ್ಕಿರುವ ತೊಂದರೆಗಳೇನು; | ಕರ್ನಾಟಕ ಹಾಲು ಮಹಾಮಂಡಳದ 16 ಜಿಲ್ಲಾ ಹಾಲು ಒಕ್ಕೂಟಗಳ ವ್ಯಾಪ್ತಿಯಲ್ಲಿ 16,381 ಹಾಲು ಉತ್ಪಾದಕರ ಸಹಕಾರ ಸಂಘಗಳು ಕಾರ್ಯನಿರ್ವಹಿಸುತ್ತಿದ್ದು, ಪ್ರತಿ ದಿನ ಸರಾಸರಿ 109.6 ಲಕ್ಷ ಲೀಟರ್ ಹಾಲನ್ನು ಸಂಗ್ರಹಿಸಲಾಗುತ್ತಿದ್ದು, ಪ್ರತಿ ಲೀಟರ್ ಹಾಲಿಗೆ ಸರಾಸರಿ ರೂ.35.29 ರಂತೆ ಒಟ್ಟು ರೂ.38.59 ಕೋಟಿ ಬಟವಾಡೆ ಮೊತ್ತವನ್ನು ನಂದಿನಿ ಹಾಲು ಮತ್ತು ಹಾಲಿನ ಉತ್ಪನ್ನಗಳ ಮಾರಾಟದ ಮೊತ್ತದಿಂದ ಹಾಲು ಉತ್ಪಾದಕರುಗಳಿಗೆ ಹಾಲಿನ ಬಟವಾಡೆಯನ್ನು ಪ್ರತಿ 15 ದಿನಗಳಿಗೊಮ್ಮೆ ಪಾವತಿ ಮಾಡಲಾಗುತ್ತಿದೆ.<br><br>ರಾಜ್ಯದ ಹಾಲು ಉತ್ಪಾದಕರನ್ನು ಉತ್ತೇಜಿಸುವ ಸಂಬಂಧ ರಾಜ್ಯ ಸರ್ಕಾರವು ಕ್ಷೀರಧಾರೆ ಯೋಜನೆಯಡಿ ಪ್ರತಿ ಲೀ.ಹಾಲಿಗೆ ರೂ.5/- ಗಳ ಪ್ರೋತ್ಸಾಹಧನವನ್ನು ನೀಡುತ್ತಿದೆ. ಪಾವತಿಗೆ ಬಾಕಿ ಇರುವ ಎರಡನೇ ಕಂತಿನ ಅನುದಾನ ಸರ್ಕಾರದಿಂದ ಬಿಡುಗಡೆಯಾಗಿದ್ದು ಸಾಮಾನ್ಯ ವರ್ಗಕ್ಕೆ ಏಪ್ರಿಲ್ ಮತ್ತು ಮೇ-2026 ರ ಮಾಹೆಗೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಜೂನ್ -2026ರ ಮಾಹೆಯ ಪ್ರೋತ್ಸಾಹಧನ ಪಾವತಿಗೆ ಕ್ರಮವಿಡಲಾಗಿದೆ. |

| | | |
|---|---|---|
| | | ಪ್ರಸ್ತುತ ಜಿಲ್ಲಾ ಹಾಲು ಒಕ್ಕೂಟಗಳಿಂದ ಜುಲೈ-2026ರ ಮಾಹೆಯ ಹಾಲಿನ ಪ್ರೋತ್ಸಾಹ ಧನದ e-sign ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |
| ಈ) | ಹಾಲಿನ ಪ್ರೋತ್ಸಾಹಧನವನ್ನು ಕಡ್ಡಾಯವಾಗಿ ಫಲಾನುಭವಿಗಳಿಗೆ ನಿಗದಿತ ಸಮಯದಲ್ಲಿ ನೀಡಲು ಸರ್ಕಾರ ರೂಪಿಸಿರುವ ನಿಯಮಗಳೇನು? | ಆರ್ಥಿಕ ಇಲಾಖೆಯಿಂದ ಅನುದಾನ ಬಿಡುಗಡೆಯಾದ ತಕ್ಷಣ ನೇರ ನಗದು ವರ್ಗಾವಣೆ (ಡಿ.ಬಿ.ಟಿ) ಮುಖಾಂತರ ಪ್ರೋತ್ಸಾಹಧನ ಪಾವತಿಗೆ ಕ್ರಮವಿಡಲಾಗುವುದು. |

**ಕಡತ ಸಂಖ್ಯೆ: ಸಿಒ 139 ಸಿಸಿಬಿ 2026**

**(ಲಕ್ಷ್ಮಣ ಎಸ್.ಸವದಿ)**
**ಸಹಕಾರ ಸಚಿವರು**